803(1371): ಶ್ರೀ ಅಂಗಾರ ಎಸ್. (ಸುಳ್ಯ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ಸುಳ್ಯ ತಾಲ್ಲೂಕಿನ ಬೆಳ್ಳಾರೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಮೂಲಭೂತ ಸೌಕರ್ಯಗಳನ್ನು ಯಾವಾಗ ಕಲ್ಪಿಸಲಾಗುವುದು ; (ವಿವರ ನೀಡುವುದು) ;

ಇ) ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮವೇನು ?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)–

ಅ) ಬಂದಿದೆ.

ಆ) ಹಾಲಿ ಕಾಲೇಜಿಗೆ ಸ್ವಂತ ಕಟ್ಟಡ ಅಸ್ತಿತ್ವದಲ್ಲಿದೆ. 2ನೇ ಹಂತದ ಕಟ್ಟಡ ನಿರ್ಮಾಣಕ್ಕಾಗಿ 2005–06ನೇ ಸಾಲಿಗೆ ರೂ.10.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಅದೇ ಸಾಲಿನಲ್ಲಿ ಗ್ರಂಥಾಲಯ ಪುಸ್ತಕ ಪೀಠೋಪಕರಣ ಕನ್ಸೂಮೊಬಲ್ಸ್ ಹಾಗೂ ಕಛೇರಿ ವೆಚ್ಚಕ್ಕಾಗಿ ರೂ.39600 ಗಳನ್ನು ಬಿಡುಗಡೆ ಮಾಡಲಾಗಿದೆ. ಸದರಿ ಕಾಲೇಜಿಗೆ 2006–07ನೇ ಸಾಲಿಗೆ ಅನುದಾನದ ಲಭ್ಯತೆಯನ್ನು ಆಧರಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಕ್ರಮಕೈಗೊಳ್ಳಲಾಗುವುದು.

804 (1053): ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ ಕ್ಷೇತ್ರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳಲ್ಲಿ ಎಷ್ಟು ಜನರನ್ನು ಅವಧಿ ಪೂರ್ಣ ವರ್ಗಾಯಿಸಲಾಗಿದೆ ;

ಆ) ಈ ರೀತಿ ವರ್ಗಾಯಿಸಲು ಕಾರಣಗಳೇನು ; (ಸಮಗ್ರವಾದ ವರದಿಯನ್ನು ನೀಡುವುದು) ?

ಶ್ರೀ ಪಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) –

ಅ) 33 ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ 196 ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಅವಧಿ ಪೂರ್ವ ವರ್ಗಾವಣೆ ಮಾಡಲಾಗಿದೆ.

ಆ) ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಶಾಸಕರು ಹಾಗೂ ಮಾನ್ಯ ಲೋಕಸಭಾ ಸದಸ್ಯರು ಹಾಗೂ ಇತರ ಜನಪ್ರತಿನಿಧಿಗಳ ಕೋರಿಕೆ ಮತ್ತು ಮಾನ್ಯ ಮುಖ್ಯಮಂತ್ರಿಗಳ ನಿರ್ದೇಶದ ಮೇರೆಗೆ, ಹಾಗೂ ಸಾರ್ವಜನಿಕ ದೂರುಗಳು ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಅವಧಿಪೂರ್ವ ವರ್ಗಾವಣೆಗಳನ್ನು ಮಾಡಲಾಗಿರುತ್ತದೆ.

805 (1375) : ಶ್ರೀ ಚನ್ನಬಸವರಾಜ್ (ಅಪ್ಪಾಜಿ) (ಮುದ್ದೇಬಿಹಾಳ್): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಶ್ರಯ ಮನೆಗಳನ್ನು ನಗರ ಪ್ರದೇಶಗಳಲ್ಲಿ ಹೊಸದಾಗಿ ಸರ್ಕಾರ ಮಂಜೂರು ಮಾಡುವುದೇ ;

ಆ) ಹಾಗಿದ್ದಲ್ಲಿ, ಯಾವ ಯಾವ ನಿಯಮಗಳನುಸಾರ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತಿದೆ ;

ಇ) ಆಶ್ರಯ ಮನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡುವ ವಿಧಾನವನ್ನು ಆಶ್ರಯ ಸಮಿತಿಗಳ ವ್ಯಾಪ್ತಿಗೆ ಅಥವಾ ಪುರಸಭಾ ವ್ಯಾಪ್ತಿಗೆ ಬಿಡಲಾಗಿದೆಯೇ ?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು)–

ಅ) ಆಶ್ರಯ ಮನೆಗಳನ್ನು ನಗರ ಪ್ರದೇಶಗಳಲ್ಲಿ ಹೊಸದಾಗಿ ಅಂದರೆ 2006–07ನೇ ಸಾಲಿನಲ್ಲಿ ಯಾವುದೇ ಗುರಿ ನೀಡಿರುವುದಿಲ್ಲ.

2005–06ನೇ ಸಾಲಿನಲ್ಲಿ ನಗರ ಆಶ್ರಯ ಯೋಜನೆಯಡಿ 50000 ಮನೆಗಳ ಗುರಿಯನ್ನು ನಿಗದಿಪಡಿಸಿದ್ದು ಆಶ್ರಯ ಸಮಿತಿಗಳ ಮುಖಾಂತರ ಅರ್ಹ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಈ ಮನೆಗಳನ್ನು